ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 28/07/2020

# ಮಾಜಿ ಸಚಿವ ನಾಯಕ ಕೊರೊನಾದಿಂದ ಸಾವು

ಸುರಪುರ: ಮಾಜಿ ಸಚಿವ ರಾಜಾ ಮದನಗೋಪಾಲ ನಾಯಕ (70) ಸೋಮವಾರ ಕೊರೊನಾ ಸೋಂಕಿನಿಂದ ನಿಧನರಾಗಿದ್ದಾರೆ. ಮೂರು ದಿನಗಳ ಹಿಂದೆ ಅವರಲ್ಲಿ ಸೋಂಕು ದೃಢಪಟ್ಟಿತ್ತು. ಹೆಚ್ಚಿನ ಚಿಕಿತ್ಸೆಗಾಗಿ ಕಲಬುರಗಿ ಕೋವಿಡ್ ಆಸ್ಪತ್ರೆಗೆ ದಾಖಲಾಗಿದ್ದರು. ಚಿಕಿತ್ಸೆ ಫಲಿಸದೆ ಕೊನೆಯುಸಿರೆಳೆದರು ಎಂದು ಮೂಲಗಳು ತಿಳಿಸಿವೆ.



1983, 1985 ಹಾಗೂ 1989ರಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಸುರಪುರ ವಿಧಾನಸಭಾ ಕ್ಷೇತ್ರದಿಂದ ಆಯ್ಕೆಯಾಗಿದ್ದರು.

**1992ರಲ್ಲಿ ವೀರಪ್ಪ ಮೊಯ್ಲಿ ಸರಕಾರದಲ್ಲಿ ಕೃಷಿ ಮಾರುಕಟ್ಟೆ, ಸಣ್ಣ ಉಳಿತಾಯ ಮತ್ತು ಲಾಟರಿ ಸಚಿವರಾಗಿ ಕಾರ್ಯನಿರ್ವಹಣೆ**

1992ರಲ್ಲಿ ವೀರಪ್ಪ ಮೊಯ್ಲಿ ಸರಕಾರದಲ್ಲಿ ಕೃಷಿ ಮಾರುಕಟ್ಟೆ, ಸಣ್ಣ ಉಳಿತಾಯ ಮತ್ತು ಲಾಟರಿ ಸಚಿವರಾಗಿ ಕಾರ್ಯನಿರ್ವಹಿಸಿದ್ದರು. 2004ರಲ್ಲಿ ಜೆಡಿಎಸ್ ಪಕ್ಷದಿಂದ ರಾಯಚೂರು ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಿ 409 ಮತಗಳಿಂದ ಪರಾಜಿತರಾಗಿದ್ದರು. ತಮ್ಮ ಅಧಿಕಾರವಧಿಯಲ್ಲಿ ಎಸ್.ಎಚ್. ಖಾನಾಪುರ ಕೃಷಿ ಉತ್ಪನ್ನ ಮಾರುಕಟ್ಟೆ ಸರಕಾರಿ ಪ್ರಥಮ ದರ್ಜೆ (ಲಡ್ಡಾ) ಕಾಲೇಜು ಮಂಜೂರಾತಿ, ನಗರದ ಸರಕಾರಿ ಸಾರ್ವಜನಿಕ ಆಸ್ಪತ್ರೆ ಮೇಲ್ದರ್ಜೆಗೇರಿಸಿ ನೂತನ ಕಟ್ಟಡ ನಿರ್ಮಾಣ, 23 ಪ್ರೌಢಶಾಲೆ, ಮೂರು ಪಿಯು ಕಾಲೇಜುಗಳ ಮಂಜೂರಾತಿ ಸೇರಿದಂತೆ ವಿವಿಧ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡಿದ್ದರು. ಪತ್ನಿ, ಇಬ್ಬರು ಪುತ್ರರನ್ನು ಅಗಲಿದ್ದಾರೆ. ತಾಲೂಕಿನ ಶೆಳ್ಳಗಿ ಗ್ರಾಮದ ಅವರ ಜಮೀನಿನಲ್ಲಿ ಸರ್ಕಾರಿ ಮಾರ್ಗ ಸೂಚಿಗಳ ಪ್ರಕಾರ ಅಂತ್ಯಕ್ರಿಯೆ ನೆರವೇರಿಸಲಾಯಿತು.